ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1164
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಬಿ.ಜೆ.ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	26-02-2018
ಉತ್ತರಿಸುವ ಸಚಿವರು	:	ಮಾನ್ಯ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಸೊಸೈಟಿಗಳಿಂದ ಪೂರೈಸುತ್ತಿರುವ ಅನ್ನಭಾಗ್ಯ ಯೋಜನೆಯ ಆಹಾರ ಧಾನ್ಯಗಳ ವಿತರಣೆಯಲ್ಲಿನ ಅವ್ಯವಸ್ಥೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ಸೊಸೈಟಿಗಳಿಂದ ಪೂರೈಸುತ್ತಿರುವ ಅನ್ನಭಾಗ್ಯ ಯೋಜನೆಯ ಆಹಾರ ಧಾನ್ಯಗಳ ವಿತರಣೆಯಲ್ಲಿನ ಅವ್ಯವಸ್ಥೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಆ)	ಹಾಗಿದ್ದರೆ, ಸೊಸೈಟಿಗಳಿಂದ ನೀಡಲ್ಪಡುವ ಆಹಾರಧಾನ್ಯಗಳ ವಿತರಣೆಯಲ್ಲಿ ಮನೆ ಯಜಮಾನನ ಹೆಬ್ಬೆರಳಿನ ಗುರುತು ಪಡೆದು ನೀಡಲಾಗುತ್ತಿದ್ದು, ಕಳೆದ 5-6 ತಿಂಗಳಿಂದ ಕೆಲವು ವಯಸ್ಸಾದ ಹಿರಿಯರ ಹೆಬ್ಬೆರಳ ಗುರುತು ಸರಿಯಾಗಿ ಹೊಂದಾಣಿಕೆ ಆಗುತ್ತಿಲ್ಲವೆಂದು ಆಹಾರಧಾನ್ಯಗಳು ವಿತರಿಸದೇ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;	ವಯಸ್ಸಾದ ಹಿರಿಯ ನಾಗರೀಕರ ಹೆಬ್ಬೆರಳಿನ ಗುರುತುಗಳ ಸಮಸ್ಯೆಗಳು ಉದ್ಭವಿಸಿದ ಸಂದರ್ಭಗಳಲ್ಲಿ ಯಾವುದೇ ಅರ್ಹ ಫಲಾನುಭವಿಗಳಿಗೆ ಪಡಿತರ ವ್ಯತ್ಯಾಸವಾಗದಂತೆ ಕ್ರಮವಹಿಸಲು ಶೇ.2 ರಷ್ಟು ಬಯೋಮೆಟ್ರಿಕ್ ವಿನಾಯಿತಿ ನೀಡಲು ಅವಕಾಶ ಕಲ್ಪಿಸಿದೆ. ಹಾಗೂ ಇಂತಹ ಸಂದರ್ಭಗಳಲ್ಲಿ ಕೂಡ ಪಡಿತರ ವಿತರಣೆಯನ್ನು ನೇರವಾಗಿ ಮಾಡಿ ಅಂತಹ ಪಡಿತರ ಚೀಟಿಗಳನ್ನು ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡುವ ಅವಕಾಶವನ್ನು ಕಲ್ಪಿಸಲಾಗಿದೆ.
ಇ)	ಹೊಂದಾಣಿಕೆ ಆಗಿಲ್ಲದ ಫಲಾನುಭವಿಗಳಿಗೆ ಬಾಕಿ ಇರುವ ಆಹಾರಧಾನ್ಯಗಳ ಲೆಕ್ಕ ಪಡೆದು ಆಹಾರ ಧಾನ್ಯಗಳನ್ನು ಸರಿಯಾಗಿ ವಿತರಿಸಲಾಗಿದೆಯೇ; ಇದರ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?	ಮೇಲ್ಕಂಡ (ಆ) ಅಂಶದಲ್ಲಿ ವಿವರಿಸಿದಂತೆ,

ಆನಾಸ 28 ಆನಾಸ 2018

(ಯು.ಟಿ.ಖಾದರ್)
ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ